ಹೊರತುಪಡಿಸಿ ಮಂಗಳವಾರ ರಜೆ ದಿನಗಳಲ್ಲಿ ಸಹ ವಿತರಣಾ ಕಾರ್ಯ ನಡೆಯುವ ಸೂಚನೆಗಳು ಇರುತ್ತವೆ. ಅಲ್ಲದೆ ನಂತರದ ದಿನಗಳಲ್ಲಿ ಮಾಹೆಯ 11ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಿಗ್ಗೆ 8.00 ರಿಂದ 12ರವರೆಗೆ ಮತ್ತು ಸಾಯಂಕಾಲ 4.00 ರಿಂದ 8.00 ಗಂಟೆಯವರೆಗೆ ಮಂಗಳವಾರ ಮತ್ತು ರಾಷ್ಟ್ರೀಯ ರಜೆಯ ದಿನಗಳನ್ನು ಹೊರತುಪಡಿಸಿ ಪಡಿತರ ವಿತರಣೆ ಕಾರ್ಯ ಜಾರಿಯಲ್ಲಿರುತ್ತದೆ.

ಇ) ಅವಶ್ಯಕವಿರುವ ಸ್ಥಳಗಳಲ್ಲಿ ನಿಯಮಾನುಸಾರ ಪರಿಶೀಲಿಸಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಕ್ರಮವಹಿಸಲಾಗುವುದು.

ಹೈದರಾಬಾದ್–ಕರ್ನಾಟಕ ಸಂಶೋಧನೆಗಾಗಿ ಅನುದಾನ

872(1150); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಹೈದ್ರಾಬಾದ್ ಕರ್ನಾಟಕದಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು;

ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೂ ಈ ಯೋಜನೆಯಡಿಯಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಹಾಗೂ ಮಂಜೂರಾದ ಅನುದಾನದಲ್ಲಿ ಎಷ್ಟು ಬಿಡುಗಡೆಯಾಗಿದೆ; (ಸಂಪೂರ್ಣ ವಿವರ ನೀಡುವುದು)

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)

ಅ) **ಮತ್ತು ಆ)** ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿಗಾಗಿ ಪ್ರಸಕ್ತ ಆಯವ್ಯಯದಲ್ಲಿ ಪ್ರತ್ಯೇಕವಾಗಿ ಯಾವುದೇ ಅನುದಾನ

ಹಂಚಿಕೆಯಾಗಿರುವುದಿಲ್ಲ. ಆದಾಗ್ಯೂ 2013–14 ಸಾಲಿಗೆ ಗುಲ್ಬರ್ಗಾ ವಿಭಾಗಕ್ಕೆ ವಿಶೇಷ ಅಭಿವೃದ್ಧಿ ಯೋಜನೆಯಡಿಯ ಒಟ್ಟು ಮೊತ್ತ ₹ 20 ಕೋಟಿಗಳಲ್ಲಿ, ₹ 8 ಕೋಟಿಗಳನ್ನು ಒದಗಿಸಲಾಗಿದೆ. ಆದಾಗ್ಯೂ ಸರ್ಕಾರದಿಂದ ಗುರುತಿಸಲ್ಪಟ್ಟ ಸಂಸ್ಥೆಗಳಿಗೆ ಮಾತ್ರ ಅಥವಾ ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹಗಳ (VGST) ಕಾರ್ಯಕ್ರಮಗಳಿಗೆ ಹಂಚಿಕೆ ಮಾಡಲಾಗುವುದು.

ಗಣಕಯಂತ್ರ ತರಬೇತಿ, ಬೋಧನಾ ತರಬೇತಿ, ಇಎಸ್‌ಡಿಎಂ ತರಬೇತಿ, ಶಿಕ್ಷಣ ಸಂಸ್ಥೆಯಲ್ಲಿ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸುವುದು, ವಿಜ್ಞಾನ ಸಮ್ಮೇಳನ, ವಿಜ್ಞಾನ ಪರಿಕರಣಗಳ ಹಂಚುವಿಕೆ, ವಿಜ್ಞಾನ ಪ್ರಯೋಗಾಲಯದ ಉನ್ನತೀಕರಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಯೋಜನಾ ಇಲಾಖೆಯು ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ, 2012–13ನೇ ಸಾಲಿಗೆ ಮೇಲ್ಕಂಡ ಕಾರ್ಯಕ್ರಮಕ್ಕಾಗಿ ₹ 20 ಕೋಟಿಯನ್ನು ಹಂಚಿಕೆ ಮಾಡಿದ್ದು ಅದನ್ನು ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದೆ.

ಅಂಕಿತಾಧಿಕಾರಿ ನೇಮಕಾತಿ

873(1151); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ರಾಜ್ಯದಲ್ಲಿ ಪ್ರತಿಯೊಂದು ಜಿಲ್ಲೆಗೆ ಅಂಕಿತಾಧಿಕಾರಿಯನ್ನು ನೇಮಕ ಮಾಡಲು ಇರುವ ನಿಯಮಗಳೇನು;

ಆ) ಬೀದರ್ ಜಿಲ್ಲೆಯಲ್ಲಿ ಅಂಕಿತಾಧಿಕಾರಿ ನೇಮಕಾತಿಯ ಸಮಯದಲ್ಲಿ ಇಲಾಖೆಯಲ್ಲಿ 10 ವರ್ಷ ಸೇವೆ ಸಲ್ಲಿಸಿರುವವರನ್ನು ನೇಮಿಸದೆ ನಿಯಮ ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಈ ರೀತಿ ನಿಯಮ ಉಲ್ಲಂಘನೆ ಮಾಡಿ ನೇಮಕಾತಿ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?